## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎಂ. ಎಸ್. ಹೆಗ್ಡೆ ನಾಗ್ರೆ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿಗಳು ಇವರಿಗೆ ಸಂಚಿತ ಸಂಭಾವನೆ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ:1) ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 232 ವಿಸೇಬಿ 2013 ದಿನಾಂಕ: 05-02-2015.

2) ವಿಚಾರಣಾಧಿಕಾರಿಯವರ ವಿಚಾರಣಾ ವರದಿ ದಿನಾಂಕ:04-05-2015

------

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ದಾವಣಗೆರೆ ಜಿಲ್ಲೆ ಹರಪ್ಪನಹಳ್ಳಿ ತಾಲ್ಲೂಕು ಮತ್ತಿಹಳ್ಳಿ ಗ್ರಾಮ ಪಂಚಾಯತಿಯಲ್ಲಿ 2013-14ನೇ ಸಾಲಿನ ಎಂಜಿಎನ್‌ಆರ್‌ಇಜಿಎ ಯೋಜನೆಯಲ್ಲಿ ಯಂತ್ರೋಪಕರಣಗಳನ್ನು ಬಳಸಿ ಕೆಲಸ ನಿರ್ವಹಿಸಿರುವ ಕುರಿತು ಶ್ರೀ ಮಲ್ಲಿಕಾರ್ಜುನಗೌಡ, ಶ್ರೀ ಬಸವರಾಜ್‌ಗೌಡ, ಶ್ರೀ ಕಾಡನಗೌಡ, ಮತ್ತಿಹಳ್ಳಿ ಗ್ರಾಮ ದಾವಣಗೆರೆ ಜಿಲ್ಲೆ ಇವರು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಿಗೆ ಸಲ್ಲಿಸಿರುವ ದೂರಿಗೆ ಸಂಬಂಧಿಸಿದಂತೆ ನಿರ್ದೇಶಕರು, ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯ ಇವರು ಮತ್ತಿಹಳ್ಳಿ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ತನಿಖೆ ನಡೆಸಿ ದಿನಾಂಕ: 20-12-2013 ರಂದು ಸರ್ಕಾರಕ್ಕೆ ಸಲ್ಲಿಸಿರುವ ವರದಿಯನ್ವಯ 2013-14ನೇ ಸಾಲಿನ ಎಂಜಿಎನ್‌ಆರ್‌ಇಜಿಎ ಯೋಜನೆಯಡಿಯಲ್ಲಿ ಹರಪನಹಳ್ಳಿ ತಾಲ್ಲೂಕು ಮತ್ತಿಹಳ್ಳಿ ಗ್ರಾಮ ಪಂಚಾಯತಿಯಲ್ಲಿ ಧನದ ಓಣಿ ದಾರಿಯಲ್ಲಿ ಚೆಕ್‌ಡ್ಯಾಂ ಕಾಮಗಾರಿ ಮತ್ತು ಗ್ರಾಮ ಪಂಚಾಯತಿ ಹಿಂಭಾಗವಿರುವ ಹುಬ್ಬಳ್ಳಿ ತಿಂದಪ್ಪನ ಕಣದಿಂದ ಮುದೇಗೌಡ್ರ ಕೆಂಚಪ್ಪನ ಹೊಲದವರೆಗೆ ನಿರ್ವಹಿಸಲಾದ ರಸ್ತೆ ನಿರ್ಮಾಣ ಕಾಮಗಾರಿಯಲ್ಲಿ ಯಂತ್ರೋಪಕರಣವನ್ನು ಬಳಸಿ ಕೆಲಸ ನಿರ್ವಹಿಸಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳಲ್ಲಿ ಭಾಗಿಯಾಗಿರುವ ಅಧಿಕಾರಿ/ನೌಕರರ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿಯಾಗಿ ಶ್ರೀ ಎಂ. ಎಸ್. ಹೆಗ್ಡೆ ನಾಗ್ರೆ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರನ್ನು ನೇಮಿಸಲಾಗಿತ್ತು. ಸದರಿಯವರು ಪ್ರಕರಣದ ಇಲಾಖಾ ವಿಚಾರಣೆಯನ್ನು ನಡೆಸಿ, ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿ: 04-05-2015 ರ ಪತ್ರದೊಂದಿಗೆ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ, ಸಂಭಾವನೆಯನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ.

ವಿಚಾರಣಾಧಿಕಾರಿಯವರು, ಇಲಾಖಾ ವಿಚಾರಣೆಯನ್ನು ನಡೆಸಿ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದರಿಂದ, ವಿಚಾರಣಾಧಿಕಾರಿಗಳಿಗೆ ಅವರ ನೇಮಕಾತಿ ಸಂದರ್ಭದಲ್ಲಿ ಚಾಲ್ತಿಯಲ್ಲಿದ್ದಂತೆ ಸಂಚಿತ ಸಂಭಾವನೆ ಹಾಗೂ ವಾಹನ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರವು ತೀರ್ಮಾನಿಸಿ ಈ ಕೆಳಗಿನಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 232 ವಿಸೇಬಿ 2013 ಬೆಂಗಳೂರು ದಿನಾಂಕ:21-05-2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಸರ್ಕಾರವು ಶ್ರೀ ಎಂ. ಎಸ್. ಹೆಗ್ಡೆ ನಾಗ್ರೆ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಹಾಗೂ ವಿಚಾರಣಾಧಿಕಾರಿಗಳು ಇವರಿಗೆ ಸರ್ಕಾರಿ ಆದೇಶ ಸಂ: ಸಿಆಸುಇ 6 ಸೇಇವಿ 2010 ದಿನಾಂಕ:28-04-2011ರ ಪ್ರಕಾರ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ. 15,000/- (ಹದಿನೈದು ಸಾವಿರ ರೂಪಾಯಿಗಳು ಮಾತ್ರ) ಗಳ ಸಂಭಾವನೆ ಮಂಜೂರು ಮಾಡಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಾವಣಗೆರೆ ಇವರು ಶ್ರೀ ಎಂ. ಎಸ್. ಹೆಗ್ಡೆ ನಾಗ್ರೆ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಹಾಗೂ ವಿಚಾರಣಾಧಿಕಾರಿಗಳು, ಇವರಿಗೆ ಸದರಿ ಮೊತ್ತವನ್ನು ಪಾವತಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ. ಬಿ&ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಾವಣಗೆರೆ.
3. ಶ್ರೀ ಎಂ. ಎಸ್. ಹೆಗ್ಡೆ ನಾಗ್ರೆ, ನಿವೃತ್ತ ನ್ಯಾಯಾಧೀಶರು, ಟಿ.ಎಫ್-4, ಸೂರ್ಯ ಕ್ಲಾಸಿಕ್, 4ನೇ ಮೇನ್, ರಾಮಮಂದಿರ ಬೀದಿ ಹತ್ತಿರ, ಯಲಚೇನಹಳ್ಳಿ ಬಸ್ ನಿಲ್ದಾಣ, ಕನಕಪುರ, ರಸ್ತೆ, ಜೆ.ಪಿ. ನಗರ ಅಂಚೆ, ಬೆಂಗಳೂರು-78, (ಮೊ.ನಂ. 9449747187)
4. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ದಾವಣಗೆರೆ ( ಮಂಡನಾಧಿಕಾರಿ).
5. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
6. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.